ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 19–10–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕೇಂದ್ರ ಸಚಿವರ ಭೇಟಿ ಹಾಗೂ ತರಬೇತಿ ಕೇಂದ್ರ ಉದ್ಘಾಟನೆ<br><br>ಶ್ರೀ ಬೀರೇಂದ್ರಸಿಂಗ್, ಕೇಂದ್ರ ಗ್ರಾಮೀಣಾಭಿವೃದ್ಧಿ ಖಾತೆ ಸಚಿವರು | **20-10-2015**<br>ಮಂಗಳವಾರ<br>ಬೆಳಿಗ್ಗೆ<br>11–00 ಗಂಟೆಗೆ | ಕೆಫೆ ಕಾಫಿ ಡೇ, ತರಬೇತಿ ಕೇಂದ್ರ, ಗ್ಲೋಬಲ್ ವಿಲೇಜ್, ಆರ್.ವಿ. ಕಾಲೇಜ್ ಹತ್ತಿರ, ಮೈಸೂರು ರಸ್ತೆ, ಬೆಂಗಳೂರು. |
| 2. | ಪತ್ರಿಕಾಗೋಷ್ಠಿ.<br><br>ಶ್ರೀ ಬೀರೇಂದ್ರಸಿಂಗ್, ಕೇಂದ್ರ ಗ್ರಾಮೀಣಾಭಿವೃದ್ಧಿ ಖಾತೆ ಸಚಿವರು<br><br>**ಸೂಚನೆ:**<br>**ಮೇಲ್ಕಂಡ ಎರಡು ಕಾರ್ಯಕ್ರಮಗಳಿಗೆ ಮಾಧ್ಯಮದವರು ತೆರಳಲು ಬೆಂಗಳೂರಿನ ಇನ್‌ಫೆಂಟ್ರಿ ರಸ್ತೆಯಲ್ಲಿರುವ ವಾರ್ತಾಸೌಧದಿಂದ ಬೆಳಿಗ್ಗೆ 9–30 ಗಂಟೆಗೆ ವಾಹನ ವ್ಯವಸ್ಥೆ ಮಾಡಲಾಗಿದೆ.** | **20-10-2015**<br>ಮಂಗಳವಾರ<br>ಮಧ್ಯಾಹ್ನ<br>1–00 ಗಂಟೆಗೆ | ಕೆಫೆ ಕಾಫಿ ಡೇ, ತರಬೇತಿ ಕೇಂದ್ರ, ಗ್ಲೋಬಲ್ ವಿಲೇಜ್, ಆರ್.ವಿ. ಕಾಲೇಜ್ ಹತ್ತಿರ, ಮೈಸೂರು ರಸ್ತೆ, ಬೆಂಗಳೂರು. |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

# ಕಚ್ಚಾ ವಸ್ತುಗಳನ್ನು ಬಳಸಿಕೊಂಡು ಗ್ರಾಮೀಣ ಗುಡಿ ಕೈಗಾರಿಕೆಗೆ ಆದ್ಯತೆ : ಮುಖ್ಯಮಂತ್ರಿ ಕರೆ

ಬೆಂಗಳೂರು, ಅಕ್ಟೋಬರ್ 19 (ಕರ್ನಾಟಕ ವಾರ್ತೆ)

ಗ್ರಾಮೀಣ ಪ್ರದೇಶದ ಯುವಜನರನ್ನು ಉದ್ಯಮಶೀಲರನ್ನಾಗಿ ಮಾಡುವುದಕ್ಕೆ ಹಾಗೂ ಪಟ್ಟಣಗಳಿಗೆ ವಲಸೆ ಹೋಗುವುದನ್ನು ತಡೆಯುವ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಲಭ್ಯವಿರುವ ಕಚ್ಚಾ ವಸ್ತುಗಳನ್ನು ಬಳಸಿಕೊಂಡು ಗ್ರಾಮೀಣ ಗುಡಿಕೈಗಾರಿಕೆ ಆರಂಭಿಸಲು ರಾಜೀವ್ ಗಾಂಧಿ ಚೈತನ್ಯ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ಬೆಂಗಳೂರಿನ ಗಾಂಧಿ ಭವನದಲ್ಲಿ ರಾಜೀವ್‌ಗಾಂಧಿ ಚೈತನ್ಯ ಯೋಜನೆಯ ಯಶಸ್ವಿ ಅನುಷ್ಠಾನಕ್ಕಾಗಿ ಯುವಜನತೆಗೆ ಸ್ವ-ಉದ್ಯೋಗ ಕೈಗೊಳ್ಳಲು ಆರ್ಥಿಕ ನೆರವಿಗಾಗಿ ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ (ಕೆವಿಜಿಬಿ) ಮತ್ತು ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ ಇವರುಗಳು ಒಡಂಬಡಿಕೆಗೆ ಸಹಿ ಮಾಡುವ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಗ್ರಾಮೀಣ ಭಾಗದಲ್ಲಿ ಹೈನುಗಾರಿಕೆ ಪ್ರಮುಖವಾದ ಕಾರ್ಯಕ್ರಮ. ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ 4 ರೂ. ಗಳ ಸಹಾಯಧನ ನೀಡಲಾಗುತ್ತಿದೆ. ಇದೇ ರೀತಿ ಇತರ ಹೈನುಗಾರಿಕೆಗಳಿಗೂ ವಿವಿಧ ರೀತಿಯ ನೆರವನ್ನು ಸರ್ಕಾರ ನೀಡುತ್ತಿದೆ. ಗ್ರಾಮೀಣ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ಸ್ವ-ಸಹಾಯ ಗುಂಪುಗಳಿಗೂ ನೆರವು ನೀಡುವ ಮೂಲಕ ಗ್ರಾಮೀಣ ಚಟುವಟಿಕೆ ಹೆಚ್ಚಿಸಬೇಕಾಗಿದೆ ಎಂದು ಮುಖ್ಯಮಂತ್ರಿಗಳು ಹೇಳಿದರು.

ಸಮಾರಂಭದಲ್ಲಿ ಮಾತನಾಡಿದ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಎಚ್. ಕೆ. ಪಾಟೀಲ್ ಅವರು ಒಡಂಬಡಿಕೆಗೆ ಸಹಿ ಆಗುತ್ತಿರುವ ಯೋಜನೆಯಲ್ಲಿ 30,000 ಜನರಿಗೆ ಸಾಲದ ನೆರವು ನೀಡಲಾಗುತ್ತಿದೆ. ಈ ಯೋಜನೆಯಡಿ ಒಡಂಬಡಿಕೆಯ ನಂತರ ನೀಡುವ ಸಾಲದಲ್ಲಿ 50,000 ರೂ. ವರೆಗೆ ಯಾವುದೇ ಜಾಮೀನು ಬೇಕಾಗಿರುವುದಿಲ್ಲ. 2 ಲಕ್ಷದವರೆಗೆ ನೀಡುವ ಸಾಲಕ್ಕೆ ಜಾಮೀನು ನೀಡುವ ಅವಕಾಶವಿದೆ. ಈ ಒಡಂಬಡಿಕೆಯು ರಾಜ್ಯದ 9 ಜಿಲ್ಲೆಗಳಿಗೆ ಅನ್ವಯವಾಗಲಿದೆ ಎಂದು ಹೇಳಿದರು.

ಒಡಂಬಡಿಕೆ ಸಹಿ ಹಾಕುವ ಕಾರ್ಯಕ್ರಮದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಸುಬಾಷ್ ಚಂದ್ರ ಮತ್ತು ಡಾ. ನಾಗಾಂಭಿಕ ದೇವಿ ಉಪಸ್ಥಿತರಿದ್ದರು. ಸರ್ಕಾರದ ಸಂಜೀವಿನಿ ಹಾಗೂ ಕೆಎಸ್‌ಆರ್‌ಎಲ್‌ಪಿಎನ್ ಅಭಿಯಾನ ನಿರ್ದೇಶಕ ಡಿ.ವಿ. ಸ್ವಾಮಿ ಹಾಗೂ ಕರ್ನಾಟಕ ವಿಕಾಸ ಗ್ರಾಮೀಣ ಬ್ಯಾಂಕ್ ಅಧ್ಯಕ್ಷ ಅಶೋಕ್ ರೆಡ್ಡಿ ಅವರು ಒಡಂಬಡಿಕೆ ಸಹಿ ಹಾಕಿದರು.

ಪಲ್ಲವಿ/ಬಾಬು:ಜಿಪಿಆರ್.

# ಅಪ್ರಾಮಾಣಿಕತೆ ತೋರುವುದಿಲ್ಲವೆಂಬ ದೃಢ ನಿರ್ಧಾರಕ್ಕೆ ಬನ್ನಿ

**– ಮುಖ್ಯಮಂತ್ರಿ**

ಬೆಂಗಳೂರು, ಅಕ್ಟೋಬರ್ 19 (ಕರ್ನಾಟಕ ವಾರ್ತೆ)

ನೂತನವಾಗಿ ಆಗಮಿಸುತ್ತಿರುವ ಅಧಿಕಾರಿಗಳು ರಾಜ್ಯದ ಜನತೆಯ ಬದುಕು ಹಸನುಗೊಳಿಸುವ ನಿಟ್ಟಿನಲ್ಲಿ ಯಾವುದೇ ಕಾರಣಕ್ಕೂ ಅಪ್ರಾಮಾಣಿಕನಾಗುವುದಿಲ್ಲ ಎಂಬ ದೃಢ ನಿರ್ಧಾರಕ್ಕೆ ಬರಬೇಕು. ಮನುಷ್ಯನಿಗೆ ಆಸೆ ಇರುತ್ತದೆ. ಆದರೆ ದುರಾಸೆ ಬಂದರೆ ಸಮಾಜದಲ್ಲಿ ಗೌರವ ಸಿಗುವುದಿಲ್ಲ ಎಂದು ಮುಖ್ಯಮಂತ್ರಿ ತಿಳಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ಪಂಚಾಯತ್ ರಾಜ್ ಎಂಜಿನಿಯರಿಂಗ್ ವಿಭಾಗಕ್ಕೆ ನೂತನವಾಗಿ ಆಯ್ಕೆಯಾದ ಕಿರಿಯ ಎಂಜಿನಿಯರ್‌ಗಳ ಸಂಕಲ್ಪ ದಿನ ಸಮಾರಂಭ ಉದ್ಘಾಟಿಸಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ ಹೊರ ತಂದಿರುವ ಗ್ರಾಮವಾರು ಮಾನವ ಅಭಿವೃದ್ಧಿ ಸೂಚ್ಯಂಕವನ್ನು ಬಿಡುಗಡೆ ಮಾಡಿ ಅವರು ಮಾತನಾಡಿದರು.

ತೀರಾ ಹಿಂದುಳಿದ ಉತ್ತರ ಕರ್ನಾಟಕ, ಹೈದರಾಬಾದ್ ಕರ್ನಾಟಕ ಪ್ರದೇಶಗಳನ್ನು ನಿರ್ಲಕ್ಷಿಸಲಾಗುತ್ತಿದೆ ಎಂಬ ಕೂಗು ಆಗಿಂದ್ದಾಗ್ಗೆ ಕೇಳಿ ಬರುತ್ತಿದೆ. ಇದನ್ನು ದೂರ ಮಾಡಿ ರಾಜ್ಯದ ಎಲ್ಲಾ ಭಾಗಗಳು ಸರ್ವತೋಮುಖವಾಗಿ ಅಭಿವೃದ್ಧಿ ಮಾಡುವ ಅಗತ್ಯವಿದೆ. ಈ ಉದ್ದೇಶ ಈಡೇರಿಕೆಗೆ ಮಾನವ ಅಭಿವೃದ್ಧಿ ಸೂಚ್ಯಂಕ ಸಹಕಾರಿಯಾಗಲಿದೆ ಎಂದರು.

ನೂತನವಾಗಿ ಆಯ್ಕೆಯಾದ ಕಿರಿಯ ಎಂಜಿನಿಯರ್‌ಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಿದ ಅವರು ಯಾವುದೇ ಕಾರಣಕ್ಕೂ ನೀವು ನಿಮ್ಮ ವೃತ್ತಿ ಜೀವನದಲ್ಲಿ ಅಪ್ರಮಾಣಿಕರಾಗಬಾರದು. ಈಗಲೇ ಈ ತೀರ್ಮಾನವನ್ನು ಕೈಗೊಂಡರೆ ಕೊನೆಯ ತನಕ ಅದೇ ರೀತಿಯೇ ಕಾರ್ಯನಿರ್ವಹಿಸಲು ಸಾಧ್ಯವಾಗುತ್ತದೆ. ಭ್ರಷ್ಟಾಚಾರಕ್ಕೊಳಗಾಗಲು ಆಸ್ಪದ ನೀಡಬಾರದು. ಪ್ರಚೋದನೆಗಳನ್ನು ಮೆಟ್ಟಿ ನಿಲ್ಲುವಂತಾಗಬೇಕು ಎಂದು ಕಿವಿಮಾತು ಹೇಳಿದರು.

ಗ್ರಾಮೀಣ ಭಾಗದ ಜನರ ಬದುಕು ಗುಣಾತ್ಮಕವಾಗಿ ಉತ್ತಮಗೊಳ್ಳಬೇಕಾದರೆ ನೀವು ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಜಾರಿಗೆ ತರುವ ಮೂಲಕ ಯೋಜನೆಗಳ ಲಾಭ ಜನರಿಗೆ ತಲುಪಿಸಬೇಕು ಎಂದರು.

ಗ್ರಾಮೀಣ ಪ್ರದೇಶದಲ್ಲಿ ಇನ್ನೂ ಅನೇಕ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಆ ನಿಟ್ಟಿನಲ್ಲಿ ಚುನಾಯಿತ ಪ್ರತಿನಿಧಿಗಳ ಸಹಕಾರದೊಂದಿಗೆ ನೀವೆಲ್ಲರೂ ಕಾರ್ಯನಿರ್ವಹಿಸಬೇಕೆಂದು ಕಿವಿಮಾತು ಹೇಳಿದರು.

ಗ್ರಾಮೀಣಾಭಿವೃದ್ಧಿ ಸಚಿವ ಎಚ್. ಕೆ. ಪಾಟೀಲ್ ಮಾತನಾಡಿ ಸೂಚ್ಯಂಕದಿಂದ ಜನಪರ ಯೋಜನೆಗಳನ್ನು ರೂಪಿಸುವ ಜತೆಗೆ ಅಗತ್ಯ ಹಣ ಬಿಡುಗಡೆಗೆ ಸಹಕಾರಿಯಾಗಲಿದೆ ಎಂದರು.

ನೂತನ ಎಂಜಿನಿಯರ್‌ಗಳನ್ನು ಅತ್ಯಂತ ಪಾರದರ್ಶಕವಾಗಿ ಯಾವುದೇ ಅಕ್ಷೇಪಕ್ಕೆ ಅವಕಾಶ ಇಲ್ಲದ ರೀತಿಯಲ್ಲಿ ನೇಮಕ ಮಾಡಲಾಗಿದೆ. ಪ್ರಸ್ತುತ 670 ಕ್ಕೂ ಹೆಚ್ಚು ಹುದ್ದೆಗಳನ್ನು ಭರ್ತಿಮಾಡಿದ್ದು. ಇನ್ನೂ 550

ಕಿರಿಯ ಎಂಜಿನಿಯರ್ ಹುದ್ದೆಗಳು ಖಾಲಿ ಇದೆ. ಅವುಗಳ ಭರ್ತಿಗೆ ಮುಖ್ಯಮಂತ್ರಿ ಅವರು ಅನುಮೋದನೆ ನೀಡಬೇಕು ಎಂದರು.

ಸಮಾರಂಭದಲ್ಲಿ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಡಾ. ನಾಗಾಂಬಿಕಾದೇವಿ, ಸುಭಾಷ್‌ಚಂದ್ರ ಮುಖ್ಯ ಇಂಜಿನಿಯರ್ ಗುರುಪ್ರಸಾದ್, ಎಸ್.ಆರ್.ಡಿ.ಐ. ನಿರ್ದೇಶಕ ಪಿ. ಶಿವಶಂಕರ್ ಅವರು ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

ನೂತನ ಕಿರಿಯ ಹಾಗೂ ಸಹಾಯಕ ಇಂಜೀನಿಯರುಗಳು ತಮ್ಮ ಕಾರ್ಯನಿರ್ವಹಣೆ ವೇಳೆ ಭಯಮುಕ್ತ, ಬರಮುಕ್ತ, ತ್ಯಾಜ್ಯ ಮುಕ್ತ, ವ್ಯಾಜ್ಯಮುಕ್ತ, ಬಯಲು ಬ್ರಹಿರ್ದೆಸೆ ಮುಕ್ತ, ಹಳ್ಳಿಗಳ ನಿರ್ಮಾಣ ಮಾಡುವ ಹಾಗೂ ಗ್ರಾಮೀಣರಿಗೆ ಉತ್ತಮ ಕುಡಿಯುವ ನೀರು ದೊರಕಿಸುವ ಮೂಲಕ, ಉತ್ತಮ ರಾಷ್ಟ್ರ ನಿರ್ಮಾಣ ಮಾಡುವ ಸಂಕಲ್ಪದೊಡನೆ ಮುಖ್ಯಮಂತ್ರಿಗಳಿಂದ ಪ್ರಮಾಣ ವಚನ ಸ್ವೀಕರಿಸಿದರು.

ಪಲ್ಲವಿ/ಬಾಬು:ಜಿಪಿಆರ್.

# ಕೆ.ಎಸ್.ಐ.ಸಿ : ಮುಖ್ಯಮಂತ್ರಿ ಪರಿಹಾರ ನಿಧಿಗೆ 90 ಲಕ್ಷ ರೂ. ಚೆಕ್ ಹಸ್ತಾಂತರ

ಬೆಂಗಳೂರು, ಅಕ್ಟೋಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ರೇಷ್ಮೆ ಉದ್ಯಮ ನಿಗಮದ ವತಿಯಿಂದ ಮುಖ್ಯಮಂತ್ರಿ ಅವರ ಪರಿಹಾರ ನಿಧಿಗೆ 90 ಲಕ್ಷ ರೂ. ಗಳ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೀಡಲಾಯಿತು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಇಂದು ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ಅಧ್ಯಕ್ಷ ಡಿ. ಬಸವರಾಜು ಅವರು 90 ಲಕ್ಷ ರೂ. ಚೆಕ್ ಮುಖ್ಯಮಂತ್ರಿಯವರಿಗೆ ಹಸ್ತಾಂತರಿಸಿದರು.

ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ನೀಲಾ ಮಂಜುನಾಥ್ ಹಾಗೂ ನಿಗಮದ ಪ್ರಧಾನ ವ್ಯವಸ್ಥಾಪಕರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಬಾಬು:ಕೆಪಿಪಿ:ಜಿಪಿಆರ್.

# ಪ್ರವರ್ಗ ಬದಲಾವಣೆ ಕುರಿತು ಬಹಿರಂಗ ವಿಚಾರಣೆ

ಬೆಂಗಳೂರು, ಅಕ್ಟೋಬರ್ 19 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ವಿವಿಧ ಜಾತಿ ಜನಾಂಗಗಳನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಹೊಸದಾಗಿ ಸೇರಿಸಲು ಪ್ರವರ್ಗ ಬದಲಾವಣೆಗೆ ಪರ್ಯಾಯ ಪದ ಸೇರ್ಪಡೆಗೆ ಮತ್ತು

ಕಾಗುಣಿತ ದೋಷ ತಿದ್ದುಪಡಿಗೆ ಸಂಬಂಧಿಸಿದಂತೆ ಅಫಿಡವಿಟ್ ಮೂಲಕ ಸ್ವೀಕರಿಸಿರುವ/ಸ್ವೀಕರಿಸುವ ಮನವಿಗಳ ಬಗ್ಗೆ ಬಹಿರಂಗ ವಿಚಾರಣೆಯನ್ನು ನಡೆಸಲು ಉದ್ದೇಶಿಸಿದೆ.

ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಬಹಿರಂಗ ವಿಚಾರಣೆ ಸಭೆ ನಡೆಸಲಿದ್ದು, ಬೆಳಗಾವಿಯಲ್ಲಿ ಅಕ್ಟೋಬರ್ 28 ರಂದು ಬೆಳಿಗ್ಗೆ 11–00 ಗಂಟೆಗೆ, ಧಾರವಾಡದಲ್ಲಿ ಅಕ್ಟೋಬರ್ 29 ರಂದು ಬೆಳಿಗ್ಗೆ 11–00 ಗಂಟೆಗೆ, ಹಾವೇರಿಯಲ್ಲಿ ಅಕ್ಟೋಬರ್ 30 ರಂದು ಬೆಳಿಗ್ಗೆ 11–00 ಗಂಟೆಗೆ.

ಪಲ್ಲವಿ/ಬಾಬು:ಜಿಪಿಆರ್.

## ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 19 (ಕರ್ನಾಟಕ ವಾರ್ತೆ)**

ಚಿತ್ರದುರ್ಗ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಕ್ಕೆ ಬೆರಳಚ್ಚುಗಾರರ ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಡಿಸೆಂಬರ್ 15 ಕೊನೆಯ ದಿನವಾಗಿದ್ದು, ಹೆಚ್ಚಿನ ವಿವರಗಳಿಗೆ ಚಿತ್ರದುರ್ಗ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವನ್ನು ಸಂಪರ್ಕಿಸಲು ಕೋರಿದೆ.

ಪಲ್ಲವಿ/ಬಾಬು:ಜಿಪಿಆರ್.